# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IV A | ಬೆಂಗಳೂರು, ಬುಧವಾರ, ೦೪, ಮೇ, ೨೦೨೨(ವೈಶಾಖ, ೧೪, ಶಕವರ್ಷ, ೧೯೪೪)<br>BENGALURU, WEDNESDAY, 04, MAY, 2022(VAISHAKHA, 14, SHAKAVARSHA, 1944) | ನಂ. ೨೬೧<br>No. 261 |
| --- | --- | --- |


## <u>ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ</u>

## <u>ಅಧಿಸೂಚನೆ</u>

## <u>ಸಂಖ್ಯೆ: ಸಂವ್ಯಶಾಇ 12 ಶಾಸನ 2022, ಬೆಂಗಳೂರು, ದಿನಾಂಕ:04.05.2022.</u>

ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ಅಧ್ಯಾದೇಶ, 2022 ಇದಕ್ಕೆ 2022ರ ಏಪ್ರಿಲ್ ತಿಂಗಳ 30ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2022ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 01 ಎಂಬುದಾಗಿ **ದಿನಾಂಕ** 04**ನೇ ಮೇ** 2022**ರಂದು** ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ- 01

## ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ)

## ಅಧ್ಯಾದೇಶ, 2022

(ಭಾರತ ಗಣರಾಜ್ಯದ ಎಪ್ಪತ್ತಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರಿಂದ ಪ್ರಖ್ಯಾಪಿತವಾಗಿ 2022 ರ ಮೇ ತಿಂಗಳ 04ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ).

ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ಅಧಿನಿಯಮ, 2004ನ್ನು (2005ರ ಕರ್ನಾಟಕ ಅಧಿನಿಯಮ 30) ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧ್ಯಾದೇಶ.

ಕರ್ನಾಟಕ ವಿಧಾನಸಭೆ ಮತ್ತು ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿ ಇಲ್ಲದಿರುವುದರಿಂದ ಮತ್ತು ಸದ್ಯಕ್ಕೆ ಸಭೆ ಸೇರುವ ಸಾಧ್ಯತೆಯಿಲ್ಲದಿರುವುದರಿಂದ ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಅಧ್ಯಾದೇಶವನ್ನು ಪ್ರಖ್ಯಾಪಿಸಲು ಶೀಘ್ರ ಕ್ರಮವನ್ನು ತೆಗೆದುಕೊಳ್ಳುವುದಕ್ಕೆ ಅವಶ್ಯಗೊಳಿಸುವಂಥ ವಿದ್ಯಮಾನಗಳು ಉಂಟಾಗಿವೆಯೆಂದು ಕರ್ನಾಟಕದ ರಾಜ್ಯಪಾಲರಿಗೆ ಮನದಟ್ಟಾಗಿರುವುದರಿಂದ;

ಆದ್ದರಿಂದ, ಈಗ ಭಾರತ ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡದಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕದ ಮಾನ್ಯ ರಾಜ್ಯಪಾಲರು ಈ ಮುಂದಿನ ಅಧ್ಯಾದೇಶವನ್ನು ಪ್ರಖ್ಯಾಪಿಸಿರುತ್ತಾರೆ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧ್ಯಾದೇಶವನ್ನು ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ಅಧ್ಯಾದೇಶ, 2022 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 9ಎ ಹೊಸ ಪ್ರಕರಣದ ಸೇರ್ಪಡೆ.-** ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ಅಧಿನಿಯಮ, 2004 (2005ರ ಕರ್ನಾಟಕ ಅಧಿನಿಯಮ 30)ರ (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮ ಎಂದು ಉಲ್ಲೇಖಿಸಲಾಗಿದೆ) 9ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು. ಎಂದರೆ:-

"**9ಎ. ಅಪರಾಧಗಳ ಸಂಜ್ಞೇಯತೆ ಮತ್ತು ಪ್ರಕರಣಗಳನ್ನು ವಿಲೀನಗೊಳಿಸುವ ಅಧಿಕಾರ.-** (1) ಈ ಅಧಿನಿಯಮದ ಅಡಿಯಲ್ಲಿನ ಅಪರಾಧವು ಸಂಜ್ಞೇಯವಾಗಿರತಕ್ಕದ್ದು ಮತ್ತು ಜಾಮೀನುರಹಿತವಾಗಿರತಕ್ಕದ್ದು.

(2) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ವಂಚನೋದ್ದೇಶದ ಬೇಪಾವತಿಗೆ ಸಂಬಂಧಿಸಿದಂತೆ ಅದೇ ಆರೋಪಿತ ವ್ಯಕ್ತಿ ಅಥವಾ ಹಣಕಾಸು ಸಂಸ್ಥೆಯ ವಿರುದ್ಧ ಜಿಲ್ಲೆಯ ಅಥವಾ ಕಮೀಷನರೇಟ್‌ನ ಒಂದು ಪೊಲೀಸ್ ಠಾಣೆಯಲ್ಲಿ ಅಥವಾ ಹಲವು ಪೊಲೀಸ್ ಠಾಣೆಗಳಲ್ಲಿ ಅಥವಾ ರಾಜ್ಯದ ಹಲವು ಪೊಲೀಸ್ ಠಾಣೆಗಳಲ್ಲಿ ಹಲವಾರು ಪ್ರಥಮ ವರ್ತಮಾನ ವರದಿಗಳು ದಾಖಲಾಗಿದ್ದಲ್ಲಿ, ಆಗ ನಿಯಮಿಸಬಹುದಾದ ಅಂಥ ಅಧಿಕಾರಿಯು ಆನಂತರದಲ್ಲಿ ದಾಖಲಾದ ಪ್ರಥಮ ವರ್ತಮಾನ ವರದಿಗಳನ್ನು ಮೊದಲಿನ ಪ್ರಕರಣದೊಂದಿಗೆ ವಿಲೀನಗೊಳಿಸಲು ಆದೇಶಿಸಬಹುದು ಹಾಗೂ ಸಾಮಾನ್ಯ ತನಿಖೆಯನ್ನು ಕೈಗೊಳ್ಳಲು ಆದೇಶಿಸಬಹುದು. ಮುಂದುವರೆದು ದಂಡ ಪ್ರಕ್ರಿಯಾ ಸಂಹಿತೆ, 1973ರ 173ನೇ ಪ್ರಕರಣದ ಅಡಿಯಲ್ಲಿ ಒಂದೇ ಅಂತಿಮ ವರದಿಯನ್ನು ಮೊದಲು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ ಅಧಿಕಾರ ವ್ಯಾಪ್ತಿಯೊಳಗಿನ ವಿಶೇಷ ನ್ಯಾಯಾಲಯದ ಮುಂದೆ ದಾಖಲಿಸುವುದು ಹಾಗೂ ಅದನ್ನು ಆ ವಿಶೇಷ ನ್ಯಾಯಾಲಯ ಅಥವಾ ಅಂಥ ಅಪರಾಧದ ಅಧಿವಿಚಾರಣೆಗೆ ಹೆಸರಿಸಲಾದ ಯಾವುದೇ ಇತರ ವಿಶೇಷ ನ್ಯಾಯಾಲಯವು ಅಧಿವಿಚಾರಣೆಯನ್ನು ನಡೆಸತಕ್ಕದ್ದು."

**3. 10ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 10ನೇ ಪ್ರಕರಣದ (3)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(4) ಈ ಅಧಿನಿಯಮದ ಅಡಿಯಲ್ಲಿ ಅಪರಾಧದ ಅಧಿವಿಚಾರಣೆಯನ್ನು ನಡೆಸುವಾಗ ವಿಶೇಷ ನ್ಯಾಯಾಲಯವು ಈ ಅಧಿನಿಯಮದ ಅಡಿಯಲ್ಲಿನ ಅಪರಾಧವನ್ನು ಹೊರತುಪಡಿಸಿ ದಂಡ ಪ್ರಕ್ರಿಯಾ ಸಂಹಿತೆ, 1973ರ ಅಡಿಯಲ್ಲಿ ಯಾವ ವಿಚಾರಣೆಗಾಗಿ ದೋಷಾರೋಪಿಸಲಾಗಿದೆಯೋ ಆ ಅಪರಾಧದ ಅಧಿವಿಚಾರಣೆಯನ್ನು ಸಹ ನಡೆಸಬಹುದು."

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

## PARLIAMENTARY AFFAIRS AND LEGISLATION SECRETARIAT

## NOTIFICATION

## NO: DPAL 12 SHASANA 2022, BENGALURU, DATED:04.05.2022

Ordered that the translation of ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ಅಧ್ಯಾದೇಶ, 2022 (2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 01) in English language, be published as authorised by the Governor of Karnataka under clause (3) of Article 348 of the Constitution of India in the Karnataka Gazette for general information.

The following translation of ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ಅಧ್ಯಾದೇಶ, 2022 (2022 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 01) in English language is published in the Official Gazette as authorised by the Governor of Karnataka under clause (3) of Article 348 of the Constitution of India.

## KARNATAKA ORDINANCE NO. 01 OF 2022

## THE KARNATAKA PROTECTION OF INTEREST OF DEPOSITORS IN FINANCIAL ESTABLISHMENTS (AMENDMENT) ORDINANCE, 2022

(Promulgated by the Governor of Karnataka in the Seventy Third year of the Republic of India and First published in the Karnataka Gazette Extra-ordinary on the 04th day of May, 2022)

An ordinance further to amend the Karnataka Protection of Interest of Depositors in Financial Establishments Act, 2004 (Karnataka Act 30 of 2005).

Whereas the Karnataka Legislative Assembly and the Karnataka Legislative Council are not in session and not likely to meet in near future the Governor of Karnataka is satisfied that the circumstances exist which render it necessary for him to take immediate action to promulgate the Ordinance for the purposes hereinafter appearing;

Now, therefore, in exercise of the powers conferred by clause (1) of Article 213 of the Constitution of India, the Governor of Karnataka is pleased to promulgate the following Ordinance, namely:-

**1. Short title and commencement.-** (1) This Ordinance may be called the Karnataka Protection of Interest of Depositors in Financial Establishments (Amendment) Ordinance, 2022.

(2) It shall come into force at once.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



**2. Insertion of new section 9A.-** In the Karnataka Protection of Interest of Depositors in Financial Establishments Act, 2004 (Karnataka Act 30 of 2005) (hereinafter referred to as the principal Act), after section 9 the following new section shall be inserted, namely:-

**"9A Cognizance of offence and power to club cases.-** (1) Offence under this Act are cognizable and Non bailable.

(2) Notwithstanding anything contained in any other law for time being in force, if multiple First Information Reports are registered either in one Police station or in various police stations of the District or Commissionerate or in various police stations of the State against the same accused person or Financial Establishment relating to fraudulent default, then such an officer as may be prescribed may order for clubbing of subsequent registered First Information Reports into the earliest case and order to carry on common investigation. Further the common Final Report be filed under section 173 of Code of Criminal Procedure, 1973 before the Special Court, within which jurisdiction the earliest First Information report was registered and that Special Court or any other Special Court designated for trial of such offence shall try the same."

**3. Amendment of section 10.-** In section 10 of the principal Act, after sub-section (3), the following shall be inserted, namely:-

"(4) When trying an offence under this Act, the Special Court may also try an offence, other than an offence under this Act, with which the accused may, under the Code of Criminal Procedure, 1973, be charged at the same trial."

The above translation of **ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ಅಧ್ಯಾದೇಶ, 2022 (2022ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 01)** be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By order and in the name of the
Governor of Karnataka,

**G. SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE